ಇ) ಈ ಕೆಲಸಕ್ಕೆ ಟೆಂಡರುಗಳನ್ನು ಈಗಾಗಲೇ ಕರೆಯಲಾಗಿದೆ. ಮತ್ತು ಅವುಗಳನ್ನು ಪರಿಶೀಲಿಸಲಾಗುತ್ತಿದೆ. ಕರ್ನಾಟಕ ವಿದ್ಯುತ್ ನಿಗಮದ ನಿರ್ದೇಶಕ ಮಂಡಳಿಯ ಮತ್ತು ಭಾರತ ಸರ್ಕಾರದ ಒಪ್ಪಿಗೆ ದೊರೆತ ನಂತರ ಮಾರ್ಚ್ 1993ರ ವೇಳೆಗೆ ಉಪಕರಣಗಳ ಸರಬರಾಜಿಗೆ ಆದೇಶ ನೀಡಲು ಯೋಚಿಸಲಾಗಿದೆ. ಈಗಿನ ಪರಿಸ್ಥಿತಿಯ ಪ್ರಕಾರ ಈ ಘಟಕವನ್ನು 1994-95ರ ಅವಧಿಯಲ್ಲಿ ಪ್ರಾರಂಭಿಸಲು ಯೋಜಿಸಲಾಗಿದೆ.

ಬಸವಕಲ್ಯಾಣ ತಾಲ್ಲೂಕಿನಲ್ಲಿ ಲೋಕೋಪಯೋಗಿ ರಸ್ತೆಗಳ ದುರಸ್ತಿ

824- ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ): ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) *ಹೈದರಾಬಾದ್ ಕರ್ನಾಟಕ ಯೋಜನೆಯಡಿಯಲ್ಲಿ ಬಸವಕಲ್ಯಾಣ ತಾಲ್ಲೂಕಿನಲ್ಲಿ ತೆಗೆದುಕೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು?*

ಆ) *ಹುಲಸೂರು, ಬಸವಕಲ್ಯಾಣ, ಮುಡುಬಿರಸ್ತೆ, ಮಂದಾಳ್-ಸಲಗಾರ್ ರಸ್ತೆ, ಭಾಲ್ಕಿ- ಬಸವಕಲ್ಯಾಣ ಹಳ್ಳಿಯ ರಸ್ತೆಗಳ ನಿರ್ಮಾಣಕ್ಕಾಗಿ ವೆಚ್ಚವಾದ ಹಣವೆಷ್ಟು?*

ಇ) *ಈ ಕಾಮಗಾರಿ ಪೂರ್ಣಗೊಳ್ಳದೆ ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಕೈಗೊಂಡ ಕ್ರಮವೇನು? ಈ ಕಾಮಗಾರಿಯನ್ನು ಎಷ್ಟು ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು?*

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು):

ಬಸವಕಲ್ಯಾಣದಲ್ಲಿ ಬಸವೇಶ್ವರ ಪ್ರತಿಮೆ ಸ್ಥಾಪನೆ.

826- ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ): ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) *ಬಸವಕಲ್ಯಾಣದಲ್ಲಿ ಬಸವೇಶ್ವರ ಪ್ರತಿಮೆ ಸ್ಥಾಪಿಸಲು ಉದ್ದೇಶವಿದ್ದು ಈ ಗಾಗಲೇ ಜನರಿಂದ ರೂ. 3.00 ಲಕ್ಷಗಳನ್ನು ಸಂಗ್ರಹಿಸಲಾಗಿದ್ದು, ಇನ್ನು ರೂ. 3.00 ಲಕ್ಷಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಈ ಪ್ರತಿಯಮೆಯ ಅನಾವರಣಕ್ಕಾಗಿ ಸರ್ಕಾರವು ಯಾವಾಗ ಸಹಾಯ ಧನ ನೀಡುವುದು.*

ಶ್ರೀ ಎಂ. ವೀರಪ್ಪ ಮೊಯ್ಲಿ (ಮುಖ್ಯ ಮಂತ್ರಿಗಳು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಶ್ವೇಶ್ವರಯ್ಯ ನಾಲಾ ಆಧುನೀಕರಣದ ಅಂದಾಜು ವೆಚ್ಚ

821 - ಶ್ರೀ ಎಂ. ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) *ವಿಶ್ವೇಶ್ವರಯ್ಯ ನಾಲಾ ಆಧುನೀಕರಣಕ್ಕಾಗಿ ಸರ್ಕಾರವು ಕ್ರಮ ಕೈಗೊಂಡಿದೆಯೇ?*

ಆ) *ಹಾಗಿದ್ದಲ್ಲಿ ಈ ಯೋಜನೆಯ ಅಂದಾಜು ಮೌಲ್ಯವೆಷ್ಟು?*

ಇ) *ಈವರೆಗೆ ಸದರಿ ಆಧುನೀಕರಣ ಕಾಮಗಾರಿಗೆ ಎಷ್ಟು ವೆಚ್ಚವಾಗಿದೆ.?*

ಈ) *ಕಳೆದ ಮೂರು ವರ್ಷಗಳಲ್ಲಿ ಎಷ್ಟು ವೆಚ್ಚ ಮಾಡಲಾಗಿದೆ.?*